All India Radio: Bangalore
National Bulletin In Kannada
12.03.2026  19.35 hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

12.03.2026  19.35 hrs
***************

ಮುಖ್ಯಾಂಶಗಳು

೧.	ದೇಶದ ಕಚ್ಚಾ ತೈಲ ಮತ್ತು ಅಡುಗೆ ಅನಿಲದ ಸ್ಥಿತಿಗತಿ ಸುಭದ್ರ - ಲೋಕಸಭೆಯಲ್ಲಿ ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿಕೆ

೨.	ಲೋಕಸಭೆಯಲ್ಲಿ ೨೦೨೫-೨೬ನೇ ಸಾಲಿನ ಎರಡನೇ ಹಂತದ ಪೂರಕ ಅನುದಾನದ ಬೇಡಿಕೆಗಳ ಕುರಿತು ಮಹತ್ವದ ಚರ್ಚೆ

೩.	ಇರಾನ್ ಸಚಿವರೊಂದಿಗೆ ಭಾರತದ ಇಂಧನ ಭದ್ರತೆ ಕುರಿತಂತೆ ಕೇಂದ್ರ ವಿದೇಶಾಂಗ ಸಚಿವರಿಂದ ಮಾತುಕತೆ - ವಿದೇಶಾಂಗ ವಕ್ತಾರ ರಣಧೀರ್ ಜೈಸ್ವಾಲ್

೪.	ಗುವಾಹಟಿಯಲ್ಲಿ ನಾಳೆ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತು ಬಿಡುಗಡೆಗೊಳಿಸಲಿರುವ ಪ್ರಧಾನಿ ನರೇಂದ್ರ ಮೋದಿ

೫.	ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಗ್ರ್ಯಾಂಡ್ ಪ್ರಿಕ್ಸ್; ಮೊದಲ ದಿನದಂದು ಭಾರತಕ್ಕೆ ನಾಲ್ಕು ಚಿನ್ನದ ಪದಕ

***************

ಪಶ್ಚಿಮ ಏಷ್ಯಾ ಪರಿಸ್ಥಿತಿ ನಡುವೆ ಭಾರತದ ಕಚ್ಚಾ ತೈಲ ಮತ್ತು ಅಡುಗೆ ಅನಿಲದ ಸ್ಥಿತಿಗತಿ ಸುಭದ್ರವಾಗಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ.

ಪಶ್ಚಿಮ ಏಷ್ಯಾ ಸಂಘರ್ಷದಿಂದಾಗಿ ಜಾಗತಿಕ ಇಂಧನ ಪೂರೈಕೆಯಲ್ಲಿ ಉಂಟಾಗಿರುವ ವ್ಯತ್ಯಯದ ನಡುವೆ ಸರ್ಕಾರದ ಕ್ರಮಗಳು ಕುರಿತು ಲೋಕಸಭೆಗೆ ಇಂದು ಹೇಳಿಕೆ ನೀಡಿದ ಅವರು, ದೇಶದ ೩೩ ಕೋಟಿ ಕುಟುಂಬಗಳಿಗೆ ವಿಶೇಷವಾಗಿ ಬಡವರು ಮತ್ತು ಹಿಂದುಳಿದ ವರ್ಗದವರಿಗೆ ಇಂಧನ ಪೂರೈಕೆ ಮಾಡುವುದು ಸರ್ಕಾರದ ಆದ್ಯತೆಯಾಗಿದೆ. ಎಲ್‌ಪಿಜಿ ಸಿಲಿಂಡರ್‌ಗಳ ವಿತರಣಾ ಅವಧಿಯಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಹರ್ಮುಜ್ ಜಲಸಂಧಿ ಮುಚ್ಚಲ್ಪಟ್ಟಿದ್ದರು, ಭಾರತ ವಿವಿಧ ರಾಷ್ಟ್ರಗಳಿಂದ ಇಂಧನ ಆಮದು ಮಾಡಿಕೊಳ್ಳುವ ಮೂಲಕ ತನ್ನ ಇಂಧನ ಮೂಲಗಳನ್ನು ವೈವಿಧ್ಯಗೊಳಿಸಿದೆ. ದೇಶದಲ್ಲಿ ಪೆಟ್ರೋಲ್, ಡೀಸೆಲ್ ಮತ್ತು ವಿಮಾನ ಇಂಧನಕ್ಕೆ ಯಾವುದೇ ಕೊರತೆಯಿಲ್ಲ, ಸರ್ಕಾರದ ನಿರ್ದೇಶನದ ಫಲವಾಗಿ ಎಲ್‌ಪಿಜಿ ಉತ್ಪಾದನೆ ಶೇಕಡ ೨೮ರಷ್ಟು ಹೆಚ್ಚಳ ಕಂಡಿದೆ ಎಂದರು.

***************

ಲೋಕಸಭೆಯಲ್ಲಿ ಇಂದು ೨೦೨೫-೨೬ನೇ ಸಾಲಿನ ಎರಡನೇ ಹಂತದ ಪೂರಕ ಅನುದಾನದ ಬೇಡಿಕೆಗಳ ಕುರಿತು ಮಹತ್ವದ ಚರ್ಚೆ ನಡೆಯಿತು.

ಒಟ್ಟು ೬೧ ಬೇಡಿಕೆಗಳನ್ನು ಒಳಗೊಂಡಿರುವ ಈ ಪ್ರಸ್ತಾವನೆಯಲ್ಲಿ, ಸರ್ಕಾರವು ಸುಮಾರು ೨ ಲಕ್ಷದ ೮೧ ಸಾವಿರ ಕೋಟಿ ರೂಪಾಯಿಗಳಿಗೂ ಅಧಿಕ ಮೊತ್ತದ ಹೆಚ್ಚುವರಿ ವೆಚ್ಚಕ್ಕೆ ಸದನದ ಅನುಮೋದನೆ ಕೋರಿದೆ.

ಚರ್ಚೆಯನ್ನು ಆರಂಭಿಸಿದ ಬಿಜೆಪಿ ಸಂಸದ ಜಗದಾಂಬಿಕಾ ಪಾಲ್, ಪಶ್ಚಿಮ ಏಷ್ಯಾದಲ್ಲಿನ ಅಸ್ಥಿರತೆಯು ಜಾಗತಿಕ ಮಟ್ಟದಲ್ಲಿ ಆತಂಕ ಮೂಡಿಸಿದೆ ಎಂದು ಅಭಿಪ್ರಾಯಪಟ್ಟರು. ಕಚ್ಚಾ ತೈಲದ ಬೆಲೆ ಪ್ರತಿ ಬ್ಯಾರೆಲ್‌ಗೆ ೮೮ ಡಾಲರ್‌ನಿಂದ ೧೧೯ ಡಾಲರ್‌ಗೆ ಏರಿಕೆಯಾಗಿರುವುದು ರಸಗೊಬ್ಬರ, ಅನಿಲ ಮತ್ತು ಸಾರಿಗೆ ವೆಚ್ಚದ ಮೇಲೆ ನೇರ ಪರಿಣಾಮ ಬೀರಲಿದೆ ಎಂದು ಅವರು ವಿವರಿಸಿದರು. ಈ ಸವಾಲುಗಳನ್ನು ಎದುರಿಸಲು ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರವು ಅಭಿವೃದ್ಧಿ ಕಾರ್ಯಗಳನ್ನು ವೇಗಗೊಳಿಸುವುದರ ಜೊತೆಗೆ ರೈತರಿಗೆ ರಸಗೊಬ್ಬರ ಸಬ್ಸಿಡಿಯನ್ನು ನೀಡುತ್ತಿದೆ ಎಂದು ಅವರು ಸಮರ್ಥಿಸಿಕೊಂಡರು.

ಸಮಾಜವಾದಿ ಪಕ್ಷದ ರಾಮ್ ಶಿರೋಮಣಿ ವರ್ಮಾ ಅವರು ಚರ್ಚೆಯಲ್ಲಿ ಪಾಲ್ಗೊಂಡು, ದೇಶದಲ್ಲಿನ ನಿರುದ್ಯೋಗ ಸಮಸ್ಯೆಯನ್ನು ಪ್ರಸ್ತಾಪಿಸಿದರು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

***************

ರಾಜ್ಯಸಭೆಯಲ್ಲಿ ಇಂದು ಗ್ರಾಮೀಣಾಭಿವೃದ್ಧಿ ಸಚಿವಾಲಯದ ಕಾರ್ಯವೈಖರಿಯ ಕುರಿತಾದ ಚರ್ಚೆಯು ಮುಂದುವರಿಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಸಂಸದೆ ಡಾ. ಸಂಗೀತಾ ಬಲವಂತ್, ಭಾರತದ ನಿಜವಾದ ಶಕ್ತಿಯು ಹಳ್ಳಿಗಳಲ್ಲಿ ಅಡಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರ, ಕಳೆದ ಕೆಲವು ವರ್ಷಗಳಲ್ಲಿ ಗ್ರಾಮೀಣ ಪ್ರದೇಶದ ಜನರನ್ನು ಮತ್ತು ಹಳ್ಳಿಗಳನ್ನು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸಬಲೀಕರಣಗೊಳಿಸಲು ಅನೇಕ ಮಹತ್ವದ ಕ್ರಮಗಳನ್ನು ಕೈಗೊಂಡಿದೆ ಎಂದರು.

ಚರ್ಚೆಯಲ್ಲಿ ಪಾಲ್ಗೊಂಡ ಕಾಂಗ್ರೆಸ್ ಸಂಸದ ಶಕ್ತಿಸಿನ್ಹ ಗೋಹಿಲ್, ಭಾರತದ ಆತ್ಮವು ಹಳ್ಳಿಗಳಲ್ಲಿ ನೆಲೆಸಿದೆ. ಗ್ರಾಮೀಣ ಭಾಗದ ಜನರಿಗೆ ಉದ್ಯೋಗ ಭದ್ರತೆ ನೀಡುವಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ - ಮನ್ರೇಗಾ ಪ್ರಮುಖ ಪಾತ್ರ ವಹಿಸಿದೆ ಎಂದು ಅವರು ಹೇಳಿದರು. ಪ್ರಸ್ತುತ ಕೇಂದ್ರ ಸರ್ಕಾರವು ಈ ಯೋಜನೆಗೆ ನೀಡುವ ಅನುದಾನವನ್ನು ಕಡಿತಗೊಳಿಸುತ್ತಿದೆ ಎಂದು ಆರೋಪಿಸಿದ ಅವರು, ಇದರಿಂದಾಗಿ ರಾಜ್ಯ ಸರ್ಕಾರಗಳ ಮೇಲೆ ಹೆಚ್ಚಿನ ಆರ್ಥಿಕ ಹೊರೆ ಬೀಳುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

***************

ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ - ಎಫ್‌ಎಸ್‌ಎಸ್‌ಎಐ ದೇಶಾದ್ಯಂತ ಹಾಲಿನ ಗುಣಮಟ್ಟ ಮತ್ತು ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಮಹತ್ವದ ಆದೇಶವೊಂದನ್ನು ಹೊರಡಿಸಿದೆ.

ಡೈರಿ ಸಹಕಾರ ಸಂಘಗಳ ಸದಸ್ಯರಲ್ಲದ ಹಾಲು ಉತ್ಪಾದಕರು ಮತ್ತು ಹಾಲು ಮಾರಾಟಗಾರರು, ತಮ್ಮ ಆಹಾರ ವ್ಯವಹಾರವನ್ನು ಮುಂದುವರಿಸಲು ಅಥವಾ ಹೊಸದಾಗಿ ಪ್ರಾರಂಭಿಸಲು ಕಡ್ಡಾಯವಾಗಿ ನೋಂದಣಿ ಅಥವಾ ಪರವಾನಗಿಯನ್ನು ಪಡೆಯಬೇಕು ಎಂದು ಪ್ರಾಧಿಕಾರ ಸೂಚಿಸಿದೆ. ಮಾರುಕಟ್ಟೆಯಲ್ಲಿ ಅನೇಕ ಹಾಲು ಉತ್ಪಾದಕರು ಮತ್ತು ಮಾರಾಟಗಾರರು ಯಾವುದೇ ಅಧಿಕೃತ ನೋಂದಣಿ ಇಲ್ಲದೆ ಕಾರ್ಯನಿರ್ವಹಿಸುತ್ತಿರುವುದು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಈ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ.

ಈ ನಿಯಮದ ಕಟ್ಟುನಿಟ್ಟಿನ ಅನುಷ್ಠಾನಕ್ಕಾಗಿ ಎಫ್ಎಸ್ಎಸ್ಎಐ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ನಿರ್ದೇಶನ ನೀಡಿದ್ದು, ತಮ್ಮ ವ್ಯಾಪ್ತಿಯಲ್ಲಿ ವಿಶೇಷ ನೋಂದಣಿ ಅಭಿಯಾನಗಳನ್ನು ಹಮ್ಮಿಕೊಳ್ಳುವಂತೆ ತಿಳಿಸಿದೆ. ಹಾಲಿನ ಉದ್ದಿಮೆಯಲ್ಲಿ ತೊಡಗಿರುವ ಪ್ರತಿಯೊಬ್ಬರೂ ಕಡ್ಡಾಯವಾಗಿ ಪರವಾನಗಿಯನ್ನು ಹೊಂದಿರುವುದನ್ನು ಖಚಿತಪಡಿಸಿಕೊಳ್ಳಲು ಆಯಾ ಭಾಗದ ಆಹಾರ ಸುರಕ್ಷತಾ ಅಧಿಕಾರಿಗಳಿಗೆ ಸೂಚಿಸಲಾಗಿದೆ.

***************

ಕಳೆದ ಕೆಲವು ದಿನಗಳಲ್ಲಿ ಇರಾನ್ ವಿದೇಶಾಂಗ ಸಚಿವ ಸೈಯದ್ ಅಬ್ಬಾಸ್ ಅರಾಘ್ಚಿ ಅವರೊಂದಿಗೆ ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಮೂರು ಬಾರಿ ಮಾತುಕತೆ ನಡೆಸಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಇತ್ತೀಚಿನ ಮಾತುಕತೆಯಲ್ಲಿ ಹಡಗು ಸಾಗಣೆಯ ರಕ್ಷಣೆ ಮತ್ತು ಭಾರತದ ಇಂಧನ ಭದ್ರತೆಗೆ ಸಂಬಂಧಿಸಿದಂತೆ ಮಾತುಕತೆ ನಡೆಸಲಾಗಿದೆ ಎಂದರು.

ಇರಾನ್‌ನಲ್ಲಿ ಸುಮಾರು ೯ ಸಾವಿರ ಭಾರತೀಯ ನಾಗರಿಕರಿದ್ದು, ಹೆಚ್ಚಿನ ಭಾರತೀಯರನ್ನು ಭಾರತ ಸರ್ಕಾರ ಟೆಹರಾನ್‌ನಿಂದ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಗಲ್ಫ್ ಪ್ರದೇಶದಲ್ಲಿ ಸಂಘರ್ಷ ಪ್ರಾರಂಭವಾದಾಗಿನಿಂದ ಹಲವು ನಾಯಕರಿಂದ ಮಾತುಕತೆ ನಡೆಸಿದ್ದು, ಶಾಂತಿ ಸ್ಥಾಪನೆಗೆ ಮಾತುಕತೆ ಮತ್ತು ರಾಜತಾಂತ್ರಿಕ ಮಾರ್ಗಗಳ ಅಗತ್ಯತೆಯ ಬಗ್ಗೆ ಒತ್ತಿ ಹೇಳಿರುವುದಾಗಿ ಮಾಹಿತಿ ನೀಡಿದ ವಿದೇಶಾಂಗ ವಕ್ತಾರ ರಣದೀರ್ ಜೈಸ್ವಾಲ್ ನಾಗರಿಕರನ್ನು ರಕ್ಷಿಸುವ ಅಗತ್ಯವನ್ನು ಒತ್ತಿ ಹೇಳಿದರು.

ಇದೇ ವೇಳೆ ನೆರೆ ರಾಷ್ಟ್ರಗಳಾದ ಬಾಂಗ್ಲಾದೇಶಕ್ಕೆ ಇಂಧನ ರಫ್ತು ಮುಂದುವರೆದಿದ್ದು, ಶ್ರೀಲಂಕಾ ಮತ್ತು ಮಾಲ್ಡೀವ್ಸ್ ದೇಶಗಳ ಪೆಟ್ರೋಲಿಯಂ ಉತ್ಪನ್ನಗಳ ಬೇಡಿಕೆಯನ್ನು ಭಾರತದ ಸಂಸ್ಕರಣಾ ಸಾಮರ್ಥ್ಯ ಮತ್ತು ದೇಶೀಯ ಲಭ್ಯತೆಗೆ ಅನುಗುಣವಾಗಿ ಪರಿಶೀಲಿಸಲಾಗುತ್ತಿದೆ ಎಂದು ಹೇಳಿದ್ದಾರೆ.

***************

ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಮತ್ತಷ್ಟು ತೀವ್ರಗೊಂಡಿದ್ದು, ಇರಾಕ್‌ನ ಬಸ್ರಾ ಸಮೀಪದ ಪರ್ಶಿಯನ್ ಕೊಲ್ಲಿಯಲ್ಲಿ ಸಂಚರಿಸುತ್ತಿದ್ದ ವಾಣಿಜ್ಯ ನೌಕೆಯ ಮೇಲೆ ಇರಾನ್ ದಾಳಿ ನಡೆಸಿದೆ.

ಮಾರ್ಷಲ್ ಐಲ್ಯಾಂಡ್ಸ್ ಧ್ವಜದಡಿ ಸಂಚರಿಸುತ್ತಿದ್ದ ಅಮೆರಿಕದ ಒಡೆತನದ 'ಸೇಫ್‌ಸೀ ವಿಷ್ಣು' ಎಂಬ ಕಚ್ಚಾ ತೈಲ ಹೊತ್ತ ಟ್ಯಾಂಕರ್ ಈ ದಾಳಿಗೆ ತುತ್ತಾಗಿದ್ದು, ಹಡಗಿನಲ್ಲಿದ್ದ ಓರ್ವ ಭಾರತೀಯ ಸಿಬ್ಬಂದಿ ಮೃತಪಟ್ಟಿದ್ದಾರೆ ಎಂದು ವರದಿಯಾಗಿದೆ. ಈ ಘಟನೆಯು ಈ ಭಾಗದ ಸಮುದ್ರ ಮಾರ್ಗದ ಸುರಕ್ಷತೆಯ ಕುರಿತು ತೀವ್ರ ಆತಂಕವನ್ನು ಮೂಡಿಸಿದೆ.

ಈ ಕುರಿತು ಮಾಹಿತಿ ನೀಡಿರುವ ಇರಾಕ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು, ಹಡಗಿನಲ್ಲಿದ್ದ ಉಳಿದ ೧೫ ಭಾರತೀಯ ಸಿಬ್ಬಂದಿಯನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ ಎಂದು ತಿಳಿಸಿದೆ. ರಾಯಭಾರ ಕಚೇರಿಯ ಅಧಿಕಾರಿಗಳು ಇರಾಕ್ ಸಬಂಧಪಟ್ಟ ಅಧಿಕಾರಿಗಳೊಂದಿಗೆ ಮತ್ತು ರಕ್ಷಿಸಲ್ಪಟ್ಟ ಸಿಬ್ಬಂದಿಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಅಗತ್ಯವಿರುವ ಎಲ್ಲಾ ರೀತಿಯ ನೆರವು ಮತ್ತು ವೈದ್ಯಕೀಯ ಸಹಾಯವನ್ನು ಒದಗಿಸುತ್ತಿದ್ದಾರೆ. ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿರುವ ಕೇಂದ್ರ ಸರ್ಕಾರವು, ಮೃತ ಸಿಬ್ಬಂದಿಯ ಪಾರ್ಥಿವ ಶರೀರವನ್ನು ಸ್ವದೇಶಕ್ಕೆ ತರಲು ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ.

***************

ಪ್ರಧಾನಿ ನರೇಂದ್ರ ಮೋದಿ ಅವರು, ಅಸ್ಸಾಂನ ಗುವಾಹಟಿಯಲ್ಲಿ ನಾಳೆ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ.

ಈ ಕುರಿತು ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾಹಿತಿ ನೀಡಿದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಪ್ರಧಾನಿ ನರೇಂದ್ರ ಮೋದಿ ಅವರು ಸುಮಾರು ೯ ಕೋಟಿ ೩೨ ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ನೇರ ವರ್ಗಾವಣೆ ಮೂಲಕ ೧೮ ಸಾವಿರದ ೬೪೦ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಿದ್ದಾರೆ ಎಂದು ತಿಳಿಸಿದರು.

***************

ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಗ್ರ್ಯಾಂಡ್ ಪ್ರಿಕ್ಸ್ ೨೦೨೬ ಆರಂಭಿಕ ದಿನದಂದೇ ಭಾರತೀಯ ಕ್ರೀಡಾಪಟುಗಳು ಉತ್ತಮ ಪ್ರದರ್ಶನ ನೀಡಿದ್ದಾರೆ.

ಪ್ಯಾರಾಲಿಂಪಿಕ್ ಚಾಂಪಿಯನ್ ಪ್ರವೀಣ್ ಕುಮಾರ್ ಪುರುಷರ ಟಿ-೪೪ ಎತ್ತರ ಜಿಗಿತ ಸ್ಪರ್ಧೆಯಲ್ಲಿ ೧.೯೬ ಮೀಟರ್ ಎತ್ತರ ಜಿಗಿಯುವ ಮೂಲಕ ಚಿನ್ನದ ಪದಕ ಗೆದ್ದರೆ, ಪುರುಷರ ಟಿ-೪೨ ವಿಭಾಗದಲ್ಲಿ ಶೈಲೇಶ್ ಕುಮಾರ್ ಚಿನ್ನದ ಪದಕ ತಮ್ಮದಾಗಿಸಿಕೊಂಡಿದ್ದಾರೆ.

*******ಮುಕ್ತಾಯ*******